**Akashvani : Bangalore**
**Regional Bulletin In Kannada**
**15.03.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**15.03.2025 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ದಾರಿ ತಪ್ಪಿಸುವ ಮಾಹಿತಿಯಿಂದ ಗ್ರಾಹಕರ ರಕ್ಷಣೆಗೆ ಸರ್ಕಾರ ಬದ್ಧ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೨. ಕಡಲ್ಕೊರೆತ ತಡೆಗೆ ಶಾಶ್ವತ ಯೋಜನೆ ರೂಪಿಸಲು ರಾಜ್ಯ ಬಜೆಟ್‌ನಲ್ಲಿ ೨೦೦ ಕೋಟಿ ರೂಪಾಯಿ ಮೀಸಲು - ವಿಧಾನಸಭಾಧ್ಯಕ್ಷ ಯು.ಟಿ. ಖಾದರ್**

**೩. ಬಿಸಿಲಿನ ತಾಪ ಹೆಚ್ಚಳ ಹಿನ್ನೆಲೆ ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸಲು ಜಿಲ್ಲಾಡಳಿತಗಳಿಂದ ಕ್ರಮ**

**೪. ಜೋಗ ಜಲಪಾತಕ್ಕೆ ಪ್ರವಾಸಿಗರಿ ಪ್ರವೇಶ ನಿರ್ಬಂಧ ಏಪ್ರಿಲ್ ೩೦ ರವರೆಗೆ ವಿಸ್ತರಣೆ**

**<><*<><>*><>**

ಇಂದು ವಿಶ್ವ ಗ್ರಾಹಕ ಹಕ್ಕುಗಳ ದಿನ.

ಗ್ರಾಹಕರ ಹಕ್ಕುಗಳು ಮತ್ತು ಅದರ ರಕ್ಷಣೆ ಎತ್ತಿಹಿಡಿಯುವ ಅಗತ್ಯವನ್ನು ನೆನಪಿಸುವ ಈ ದಿನವನ್ನು ಪ್ರತಿ ವರ್ಷ ಮಾರ್ಚ್ ೧೫ ರಂದು ಆಚರಿಸಲಾಗುತ್ತದೆ. ಎಲ್ಲಾ ಗ್ರಾಹಕರ ಮೂಲಭೂತ ಹಕ್ಕುಗಳನ್ನು ಉತ್ತೇಜಿಸಲು ಮತ್ತು ಆ ಹಕ್ಕುಗಳನ್ನು ಗೌರವಿಸಿ, ರಕ್ಷಿಸಿ, ಪ್ರೋತ್ಸಾಹಿಸಲು ಈ ದಿನ ಅವಕಾಶ ಒದಗಿಸುತ್ತದೆ. 'ಸುಸ್ಥಿರ ಜೀವನಶೈಲಿಯೆಡೆಗೆ ನ್ಯಾಯಯುತ ಪರಿವರ್ತನೆ' ಎಂಬುದು ೨೦೨೫ ರ ವಿಶ್ವ ಗ್ರಾಹಕ ಹಕ್ಕುಗಳ ದಿನದ ಧ್ಯೇಯವಾಕ್ಯವಾಗಿದೆ. ಗ್ರಾಹಕರ ಹಕ್ಕುಗಳನ್ನು ರಕ್ಷಿಸಲು ಮತ್ತು ಅವರ ಕುಂದು-ಕೊರತೆಗಳನ್ನು ಶೀಘ್ರವಾಗಿ ಪರಿಹರಿಸಲು ಸರ್ಕಾರ ವಿವಿಧ ಕ್ರಮಗಳನ್ನು ತೆಗೆದುಕೊಂಡಿದೆ. ಗ್ರಾಹಕ ವ್ಯವಹಾರಗಳ ಸಚಿವಾಲಯವು 'ಜಾಗೋ ಗ್ರಾಹಕ ಜಾಗೋ' ಮೂಲಕ ವಿವಿಧ ಗ್ರಾಹಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಕುಂದು-ಕೊರತೆಗಳಿಗೆ ಪರಿಹಾರವನ್ನು ತ್ವರಿತಗೊಳಿಸಲು ರಾಷ್ಟ್ರೀಯ ಗ್ರಾಹಕ ಸಹಾಯವಾಣಿ, ಸಾವಿರಕ್ಕೂ ಹೆಚ್ಚು ಕಂಪನಿಗಳೊಂದಿಗೆ ಪಾಲುದಾರಿಕೆ ಹೊಂದಿದೆ. ವಿಶ್ವ ಗ್ರಾಹಕ ಹಕ್ಕುಗಳ ದಿನದ ಅಂಗವಾಗಿ ಆಯೋಜಿಸಿದ್ದ ವೆಬಿನಾರ್‌ನಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಗ್ರಾಹಕರಿಗೆ ಉಪಯುಕ್ತ ಮಾಹಿತಿ ನೀಡುವ ಜತೆಗೆ ದಾರಿ ತಪ್ಪಿಸುವ ಮಾಹಿತಿಯ ವಿರುದ್ಧ ರಕ್ಷಣೆ ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಬದ್ಧವಾಗಿದೆ. ಗ್ರಾಹಕ ಸಬಲೀಕರಣದ ಮೇಲೆ ಕೇಂದ್ರೀಕರಿಸುವ ಮೂಲಕ ಸರ್ಕಾರ, ಕುಂದು-ಕೊರತೆ ಪರಿಹಾರ ಕಾರ್ಯ ವಿಧಾನವನ್ನು ಆಧುನೀಕರಿಸಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದರಾಮಯ್ಯ ಮಂಡಿಸಿರುವ ಆಯವ್ಯಯದಲ್ಲಿ ಕರಾವಳಿಯ ಪ್ರಮುಖ ಸಮಸ್ಯೆಯಾದ ಕಡಲು ಕೊರೆತ ತಡೆಗೆ ಶಾಶ್ವತ ಯೋಜನೆ ರೂಪಿಸಲು ೨೦೦ ಕೋಟಿ ರೂಪಾಯಿ ಮೀಸಲಿಡಲಾಗಿದೆ ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ನೇತ್ರಾವತಿ ನದಿಗೆ ಅಡ್ಡಲಾಗಿ ಎರಡು ಹೊಸ ಸೇತುವೆಗಳನ್ನು ನಿರ್ಮಿಸಲಾಗುವುದು. ಮಂಗಳೂರಿನ ವೆನ್ಲಾಕ್ ಆಸ್ಪತ್ರೆ ಸೇರಿದಂತೆ ಪ್ರಮುಖ ಆಸ್ಪತ್ರೆಗಳನ್ನು ಒಟ್ಟು ೬೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನವೀಕರಣ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಪುತ್ತೂರಿನಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಈಗಿರುವ ೧೦೦ ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆಯನ್ನು ಉನ್ನತೀಕರಿಸಲು ಪ್ರಸಕ್ತ ವರ್ಷದಲ್ಲಿ ಕ್ರಮವಹಿಸಲಾಗುವುದು. ರಾಜ್ಯದಲ್ಲಿ ಜಲಸಾರಿಗೆ ಕ್ಷೇತ್ರದಲ್ಲಿ ಕರಾವಳಿಯಲ್ಲಿ ವ್ಯವಸ್ಥಿತ ಮೂಲಸೌಲಭ್ಯ ಒದಗಿಸಲು ಹಾಗೂ ನೌಕಾ ಚಟುವಟಿಕೆಗಳ ನಿರ್ವಹಣೆಯಲ್ಲಿ ದಕ್ಷತೆ ತರಲು ಸರ್ಕಾರ ಬದ್ಧವಾಗಿದೆ ಎಂದು ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.

**<><*<><>*><>**

ದಾವಣಗೆರೆ ಜಿಲ್ಲೆಯ ೬ ತಾಲೂಕುಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಬಹುದಾದ ೧೯೭ ಗ್ರಾಮಗಳನ್ನು ಗುರುತಿಸಲಾಗಿದ್ದು, ಸಮಸ್ಯೆ ಪರಿಹಾರಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಹೇಳಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿರುವ ಅವರು, ದಾವಣಗೆರೆ ತಾಲೂಕಿನಲ್ಲಿ ೭೪, ಹರಿಹರ-೨೭, ಚನ್ನಗಿರಿ-೧೧, ಹೊನ್ನಾಳಿ-೨೯, ನ್ಯಾಮತಿ-೧೮ ಮತ್ತು ಜಗಳೂರು ತಾಲೂಕಿನಲ್ಲಿ ೩೮ ಸಮಸ್ಯಾತ್ಮಕ ಗ್ರಾಮಗಳೆಂದು ಗುರುತಿಸಿ ಪಟ್ಟಿ ಮಾಡಲಾಗಿದೆ ಎಂದರು. ಬಾಡಿಗೆ ಆಧಾರದ ಮೇಲೆ ೧೨೬ ಖಾಸಗಿ ಕೊಳವೆಬಾವಿಗಳನ್ನು ಗುರುತಿಸಲಾಗಿದ್ದು, ೧೫ನೇ ಹಣಕಾಸು ಸೇರಿದಂತೆ ವಿವಿಧ ಯೋಜನೆಯ ಅನುದಾನ ಬಳಕೆ ಮಾಡಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

**ಧ್ವನಿ: ಸುರೇಶ್ ಇಟ್ನಾಳ್, ಜಿಪಂ ಸಿಇಒ**

**<><*<><>*><>**

ಯಾದಗಿರಿ ಜಿಲ್ಲೆಯಲ್ಲಿ ಮುಂದಿನ ಮೂರು ತಿಂಗಳಿನಲ್ಲಿ ಗರಿಷ್ಠ ೪೫ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಮತ್ತು ಬಿಸಿಗಾಳಿ ಬೀಸುವ ಸಂಭವವಿದೆ. ಇದರಿಂದ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಸಾರ್ವಜನಿಕರು ಮುಂಜಾಗ್ರತೆ ವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ. ರಾಷ್ಟ್ರೀಯ ಹಾಗೂ ರಾಜ್ಯ ಹವಾಮಾನ ಇಲಾಖೆ ಸೂಚನೆಯಂತೆ ಜಿಲ್ಲೆಯಲ್ಲಿ ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ತಾಪಮಾನ ೪೫ ಡಿಗ್ರಿ ಸೆಲ್ಸಿಯಸ್‌ವರೆಗೂ ತಲುಪುವ ಸಂಭವವಿರುತ್ತದೆ ಎಂದು ಮುನ್ನೆಚ್ಚರಿಕೆ ನೀಡಲಾಗಿದೆ. ಹೀಗಾಗಿ ಮುನ್ನೆಚ್ಚರಿಕೆಯ ಭಾಗವಾಗಿ ಜಿಲ್ಲಾಡಳಿತದ ಸಲಹೆಗಳನ್ನು ಸಾರ್ವಜನಿಕರು ಪಾಲಿಸಬೇಕು ಎಂದರು. ಬಿಸಿಗಾಳಿಯಿಂದ ರಕ್ಷಣೆ ಹಿನ್ನೆಲೆಯಲ್ಲಿ ಮಧ್ಯಾಹ್ನ ೧೨ ರಿಂದ ೩ ಗಂಟೆಯವರೆಗೆ ಆದಷ್ಟು ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಿ, ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ನೀರು ಕುಡಿಯಿರಿ, ಸಾಧ್ಯವಾದಷ್ಟು ಹಗುರವಾದ, ತಿಳಿ ಬಣ್ಣದ, ಸಡಿಲವಾದ ಮತ್ತು ರಂಧ್ರವಿರುವ ಹತ್ತಿ ಬಟ್ಟೆಗಳನ್ನು ಧರಿಸುವಂತೆ ಅವರು ಸಲಹೆ ನೀಡಿದ್ದಾರೆ.

ದೇಹವನ್ನು ನಿರ್ಜಲೀಕರಣಗೊಳಿಸುವ ಮದ್ಯ, ಕಾರ್ಬೋನೇಟೆಡ್ ತಂಪು ಪಾನೀಯ, ಚಹಾ, ಕಾಫಿ ಮತ್ತು ಹೆಚ್ಚಿನ ಪ್ರೋಟೀನ್ ಆಹಾರವನ್ನು ಸೇವಿಸದಿರಿ. ಬಿಸಿಲಿನಲ್ಲಿ ಹೋಗುವಾಗ ಛತ್ರಿ, ಟೋಪಿ, ಬೂಟುಗಳು ಅಥವಾ ಚಪ್ಪಲ್‌ಗಳನ್ನು ಬಳಸಿ, ಹೊರಗಿನ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕಗಳನ್ನು ತಪ್ಪಿಸಿ ಎಂದು ಯಾದಗಿರಿ ಜಿಲ್ಲಾಧಿಕಾರಿ ಸಲಹೆ ನೀಡಿದ್ದಾರೆ.

**<><*<><>*><>**

ವಿಶ್ವವಿಖ್ಯಾತ ಜೋಗ ಜಲಪಾತ ಪ್ರದೇಶದ ವ್ಯಾಪ್ತಿಯಲ್ಲಿ ಪ್ರವಾಸಿಗರಿಗೆ ಮೂಲಸೌಲಭ್ಯ ಒದಗಿಸಲು ಸಮಗ್ರ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ. ಈ ಕಾಮಗಾರಿಗಳಲ್ಲಿ ಜೋಗ ಜಲಪಾತದ ಮುಖ್ಯದ್ವಾರದ ಕಾಮಗಾರಿಯೂ ಒಂದಾಗಿರುವ ಕಾರಣ, ಏಪ್ರಿಲ್ ೩೦ ರವರೆಗೆ ಜೋಗ ಜಲಪಾತಕ್ಕೆ ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಪ್ರವೇಶ ನಿರ್ಬಂಧವನ್ನು ವಿಸ್ತರಿಸಲಾಗಿದೆ. ಜೋಗ ಜಲಪಾತದ ಮುಖ್ಯದ್ವಾರದ ಕಾಮಗಾರಿಯು ಕಾಲ ಮಿತಿಯೊಳಗೆ ಪೂರ್ಣಗೊಳಿಸಬೇಕಿದ್ದು, ಕಾಮಗಾರಿ ಅನುಷ್ಠಾನದ ಸಮಯದಲ್ಲಿ ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಯಾವುದೇ ರೀತಿಯ ತೊಂದರೆಯಾಗಬಾರದು ಎಂಬ ಹಿತದೃಷ್ಟಿಯಿಂದ ಜೋಗ ಜಲಪಾತದ ಪ್ರವೇಶ ದ್ವಾರವನ್ನು ಜನವರಿ ೧ ರಿಂದ ಮಾರ್ಚ್ ೧೫ ರವರೆಗೆ ಮುಚ್ಚಲಾಗಿತ್ತು. ಆದರೆ ಇದರುವರೆಗೂ ಜೋಗ ಜಲಪಾತದ ಮುಖ್ಯ ದ್ವಾರದ ಕಾಮಗಾರಿಯು ಪೂರ್ಣಗೊಳ್ಳದೇ ಇರುವುದರಿಂದ ಏಪ್ರಿಲ್ ೩೦ ರವರೆಗೆ ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಜೋಗ ಜಲಪಾತಕ್ಕೆ ಪ್ರವೇಶ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜೋಗ ನಿರ್ವಹಣಾ ಪ್ರಾಧಿಕಾರದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ.

**<><*<><>*><>**

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರೆಯ ದೊಡ್ಡ ರಥೋತ್ಸವ ನಾಳೆ ನಡೆಯಲಿದೆ. ಜಾತ್ರೆಗೆ ಅಂತಿಮ ಹಂತದ ಸಿದ್ಧತೆಗಳು ಪೂರ್ಣಗೊಂಡಿದ್ದು, ಹಟ್ಟಿ ತಿಪ್ಪೇಶನ ಜಾತ್ರೆಗೆ ಕ್ಷಣಗಣನೆ ಆರಂಭವಾಗಿದೆ. ಜಾತ್ರೆಗೆ ನಾಡಿನ ಹಲವು ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಮೂಲಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಲಾಗಿದೆ. ಪಟ್ಟಣದ ಎಲ್ಲಾ ವಾರ್ಡ್ ಮತ್ತು ರಸ್ತೆಯ ಇಕ್ಕೆಲಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಬಿಸಿಲು ಹೆಚ್ಚಿರುವ ಕಾರಣ ಭಕ್ತಾಧಿಗಳಿಗೆ ಕುಡಿಯುವ ನೀರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಕಂದಾಯ ಇಲಾಖೆಯಿಂದ ಸುಮಾರು ೫೦ ಟ್ಯಾಂಕರ್‌ಗಳ ಮೂಲಕ ಶುದ್ಧ ಕುಡಿಯುವ ನೀರಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೩೦ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

**<><*<><>*><>**

ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಮಾಜಿ ಅಧ್ಯಕ್ಷ, ಜಾನಪದ ವಿದ್ವಾಂಸ ಡಾ. ವಾಮನ ನಂದಾವರ ಇಂದು ಬೆಳಗ್ಗೆ ಮಂಗಳೂರಿನ ಉಳಾಯಿಬೆಟ್ಟುವಿನಲ್ಲಿ ನಿಧನ ಹೊಂದಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿದ್ದ ಅವರು, ತುಳು ಭಾಷಾ ಅಧ್ಯಯನಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಕೋಟಿ ಚೆನ್ನಯರ ಕುರಿತು ಸಂಶೋಧನೆ ಕೈಗೊಂಡ ಇವರು, ಸುಮಾರು ೨೫ ಕೃತಿಗಳನ್ನು ರಚಿಸಿದ್ದಾರೆ. ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯದ ಅಧ್ಯಯನ ಮಾರ್ಗದರ್ಶಕರಾಗಿ, ಪಿಲಿಕುಳ ನಿಸರ್ಗಧಾಮದ ಯೋಜನಾಧಿಕಾರಿಯಾಗಿ ಅವರು ಕರ್ತವ್ಯ ಸಲ್ಲಿಸಿದ್ದರು. ತುಳು, ಕನ್ನಡ ವಿದ್ವಾಂಸರಾಗಿದ್ದ ಡಾ.ವಾಮನ ನಂದಾವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ.

**<><*<><>*><>**

ಸ್ವಾತಂತ್ರ್ಯ ಹೋರಾಟಗಾರ, ಹಿರಿಯ ಸಾಹಿತಿ ಹಾಗೂ ವಿದ್ವಾಂಸ ಡಾಕ್ಟರ್ ಪಂಚಾಕ್ಷರಿ ಹಿರೇಮಠ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟಗಾರ, ಬಹುಭಾಷಾ ಪಂಡಿತ ಡಾಕ್ಟರ್ ಪಂಚಾಕ್ಷರಿ ಹಿರೇಮಠ ಅವರ ನಿಧನದ ಸುದ್ದಿ ತಿಳಿದು ದುಃಖವಾಯಿತು. ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ದೇಶ ಸೇವೆಗೈಯ್ಯುವುದರ ಜೊತೆಗೆ ಹಲವು ಸಾಹಿತ್ಯ ಪ್ರಕಾರಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದರು. ಅವರ ಅಗಲಿಕೆಯಿಂದ ನಾಡಿನ ಸಾರಸ್ವತ ಲೋಕ ಬಡವಾಗಿದೆ ಎಂದು ಹೇಳಿದ್ದಾರೆ. ಕೊಪ್ಪಳ ಜಿಲ್ಲೆ, ಬಿಸರಹಳ್ಳಿಯಲ್ಲಿ ಇಂದು ಸಂಜೆ ೪.೩೦ಕ್ಕೆ ಪಾರ್ಥಿವ ಶರೀರದ ಅಂತ್ಯಕ್ರಿಯೆ ನೆರವೇರಲಿದೆ.

**<><*<><>*><>**

ಪರಿಶಿಷ್ಟ ಜಾತಿ, ಪಂಗಡಗಳ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ಪರಿಹಾರದ ಜೊತೆಗೆ ಶೀಘ್ರ ನ್ಯಾಯ ದೊರಕಿಸುವುದು ಮುಖ್ಯ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ೨೦೨೫ನೇ ಸಾಲಿನ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ ಹಾಗೂ ಎಸ್.ಸಿ.ಪಿ-ಟಿ.ಎಸ್.ಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**